**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್. ಭೋಜೇಗೌಡ ಇವರ ನಿಯಮ 330ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ.**

**ವಿಷಯ:**

ಕರ್ನಾಟಕ ರಾಜ್ಯದ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಸಾವಿರಾರು ಪದವಿ ಕಾಲೇಜುಗಳು ಇರುತ್ತವೆ. ಇದರಲ್ಲಿ ಎನ್.ಇ.ಪಿ (NEP) ಪಠ್ಯಕ್ರಮವಿರುತ್ತದೆ. ಸದರಿ ಕ್ರಮದಲ್ಲಿ ಲಕ್ಷಾಂತರ ವಿದ್ಯಾರ್ಥಿಗಳು ವ್ಯಾಸಂಗ ಮಾಡಿ ಶೈಕ್ಷಣಿಕ ವರ್ಷ 2023-24ರಲ್ಲಿ ಉತ್ತೀರ್ಣರಾಗಿರುತ್ತಾರೆ. ಇವರ ಮುಂದಿನ ವ್ಯಾಸಂಗಕ್ಕೆ ಪದವಿಯ ಅಂಕಪಟ್ಟಿಯ ಅವಶ್ಯವಿರುತ್ತದೆ. ಆದರೆ ಎನ್.ಇ.ಪಿ (NEP) ಪಠ್ಯಕ್ರಮದಡಿ ವ್ಯಾಸಂಗ ಮಾಡಿ ಉತ್ತೀರ್ಣರಾದ ಸಾವಿರಾರು ವಿದ್ಯಾರ್ಥಿಗಳಿಗೆ ಇಲ್ಲಿಯವರೆಗೆ ಪದವಿಯ ಅಂಕಪಟ್ಟಿ ನೀಡದೆ ಇರುವುದರಿಂದ ಇವರ ಮುಂದಿನ ವ್ಯಾಸಂಗಕ್ಕೆ ತೊಂದರೆಯಾಗಿರುತ್ತದೆ.

ಆದ್ದರಿಂದ, ಸರ್ಕಾರ ಇದರ ಬಗ್ಗೆ ತುರ್ತು ಕ್ರಮವಹಿಸಿ ಇದಕ್ಕೆ ಕಾರಣಕರ್ತರಾದವರ ಮೇಲೆ ಸೂಕ್ತ ಕ್ರಮಕೈಗೊಂಡು ತೊಂದರೆಗೆ ಸಿಲುಕಿರುವ ಸಾವಿರಾರು ವಿದ್ಯಾರ್ಥಿಗಳಿಗೆ ಅವರ ಪದವಿಯ ಅಂಕಪಟ್ಟಿಗಳನ್ನು ನೀಡಬೇಕೆಂದು ಸದನದಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ಭಾರತ ಸರ್ಕಾರದ ಪತ್ರ ಸಂಖ್ಯೆ: F.No-5-3/2016-U-Policy, Dated:31.10.2016ರನ್ವಯ NAD (National Academic Depository) ಯೋಜನೆಯ ಅನುಷ್ಠಾನಕ್ಕಾಗಿ UGC ಯನ್ನು ಅಧಿಕೃತ ಸಂಸ್ಥೆಯಾಗಿ ಗೊತ್ತುಪಡಿಸಿರುತ್ತದೆ. UGC ಯು NAD ಪ್ರಾರಂಭವಾದಾಗಿನಿಂದ ವಿವಿಧ ಕೇಂದ್ರಿಯ ವಿಶ್ವವಿದ್ಯಾಲಯಗಳು, ರಾಜ್ಯ ವಿಶ್ವವಿದ್ಯಾಲಯಗಳು, ಖಾಸಗಿ ವಿಶ್ವವಿದ್ಯಾಲಯಗಳು, ಕೇಂದ್ರಿಯ ಉನ್ನತ ಶಿಕ್ಷಣ ಸಂಸ್ಥೆಗಳು, ಶಾಲಾ ಮಂಡಳಿಗಳು ಸೇರಿದಂತೆ ಅನೇಕ ಶೈಕ್ಷಣಿಕ ಸಂಸ್ಥೆಗಳು NAD ನಲ್ಲಿ ವಿದ್ಯಾರ್ಥಿಗಳ ಅಂಕಪಟ್ಟಿ ಮತ್ತು ಪ್ರಮಾಣ ಪತ್ರಗಳನ್ನು ಡಿಜಿಟಲ್ ಪ್ರತಿಗಳನ್ನು NAD ಮತ್ತು DigiLocker ನಲ್ಲಿ ಅಪ್ ಲೋಡ್ / ಶೇಖರಿಸಲು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಸೂಚನೆ ನೀಡಿರುತ್ತದೆ.

ಯುಜಿಸಿಯ ನಿರ್ದೇಶನದನುಸಾರ ರಾಜ್ಯ ಸರ್ಕಾರವು 2023-24ನೇ ಶೈಕ್ಷಣಿಕ ಸಾಲಿನಿಂದ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ಅಧೀನ ಇಲಾಖೆಗಳು, ಸಾರ್ವಜನಿಕ ವಿಶ್ವವಿದ್ಯಾಲಯಗಳು ಹಾಗೂ ಎಲ್ಲಾ ಶೈಕ್ಷಣಿಕ ಸಂಸ್ಥೆಗಳು ಪದವಿ ಮತ್ತು ಸ್ನಾತಕೋತ್ತರ ಪದವಿ ಅಂಕಪಟ್ಟಿಗಳು, ಪ್ರಮಾಣ ಪತ್ರಗಳು ಮತ್ತು ಇತರೆ ಶೈಕ್ಷಣಿಕ ದಾಖಲೆಗಳನ್ನು NAD- DigiLocker ನಲ್ಲಿ ಡಿಜಿಟಲ್ ರೂಪದಲ್ಲಿ ಕಡ್ಡಾಯವಾಗಿ ಸಂಗ್ರಹಿಸಿಡಲು, ಉನ್ನತ ಶಿಕ್ಷಣದ ವಿದ್ಯಾರ್ಥಿಗಳು ಸದರಿ ಅಂಕಪಟ್ಟಿಗಳ Credits ಗಳನ್ನು Academic Bank of Credit (ABC) ನಲ್ಲಿ ಕಡ್ಡಾಯವಾಗಿ ನೋಂದಾಯಿಸಿಕೊಳ್ಳಲು ನಿರ್ದೇಶನ ನೀಡಲಾಗಿದೆ.

ರಾಷ್ಟ್ರೀಯ ಶಿಕ್ಷಣ (NEP) ನೀತಿ ಅಡಿಯಲ್ಲಿ ತೇರ್ಗಡೆಗೊಂಡಿರುವ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ನೀಡದಿರುವಂತೆ ಸರ್ಕಾರದಿಂದ ಯಾವುದೇ ನಿರ್ದೇಶನವನ್ನು ನೀಡಿರುವುದಿಲ್ಲ.

...2

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಇಜಿಒವಿ 2023, ದಿನಾಂಕ:16.10.2023ರಲ್ಲಿ 2023-24ನೇ ಶೈಕ್ಷಣಿಕ ಸಾಲಿನಿಂದ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ಅಧೀನ ಇಲಾಖೆಗಳು, ಸಾರ್ವಜನಿಕ ವಿಶ್ವವಿದ್ಯಾಲಯಗಳು ಹಾಗೂ ಎಲ್ಲಾ ಶೈಕ್ಷಣಿಕ ಸಂಸ್ಥೆಗಳು ಪದವಿ ಮತ್ತು ಸ್ನಾತಕೋತ್ತರ ಪದವಿ ಅಂಕಪಟ್ಟಿಗಳು, ಪ್ರಮಾಣ ಪತ್ರಗಳು ಮತ್ತು ಇತರೆ ಶೈಕ್ಷಣಿಕ ದಾಖಲೆಗಳನ್ನು NAD- DigiLocker ನಲ್ಲಿ ಡಿಜಿಟಲ್ ರೂಪದಲ್ಲಿ ಕಡ್ಡಾಯವಾಗಿ ಸಂಗ್ರಹಿಸಿಡಲು, ಉನ್ನತ ಶಿಕ್ಷಣದ ವಿದ್ಯಾರ್ಥಿಗಳು ಸದರಿ ಅಂಕಪಟ್ಟಿಗಳ Credits ಗಳನ್ನು Academic Bank of Credit (ABC) ನಲ್ಲಿ ಕಡ್ಡಾಯವಾಗಿ ನೋಂದಾಯಿಸಿಕೊಳ್ಳಲು ಆದೇಶಿಸಿ, ವಿವಿಧ ನೇಮಕಾತಿ ಪ್ರಾಧಿಕಾರಗಳು/ ಸಂಸ್ಥೆಗಳು ನೇಮಕಾತಿ ಸಮಯದಲ್ಲಿ NAD-DigiLocker ನಲ್ಲಿನ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ದೃಢೀಕೃತವೆಂದು ಪರಿಗಣಿಸುವಂತೆ ಎಲ್ಲಾ ವಿಶ್ವವಿದ್ಯಾಲಯಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.

**ಸಂಖ್ಯೆ: ಇಡಿ 263 ಯುಎನ್ಇ 2024**

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ, ಸಚಿವರು